**ದಿನಾಂಕ: 23-05-2017ರಂದು ಅಪರಾಹ್ನ 4.00 ಗಂಟೆಗೆ ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರ ಅಧ್ಯಕ್ಷತೆಯಲ್ಲಿ 2015-16ನೇ ಸಾಲಿನಲ್ಲಿ ಹಿಂದುಳಿದ ಪ್ರದೇಶ ಅಭಿವೃದ್ಧಿ ಅನುದಾನ ನಿಧಿ ಯೋಜನೆಯಡಿ Exit Plan ನಡಿ ರಾಜ್ಯ ಸರ್ಕಾರವು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು ಇವರಿಗೆ ರೂ.3.09 ಕೋಟಿಗಳನ್ನು ಬಿಡುಗಡೆಗೊಳಿಸಿರುವುದನ್ನು ಬಳಕೆ ಮಾಡದೇ ಬಾಕಿ ಉಳಿಸಿಕೊಂಡಿರುವುದನ್ನು ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡವನ್ನು ಸ್ಥಾಪಿಸಲು ಬಳಸಿಕೊಳ್ಳುವ ಕುರಿತು ಚರ್ಚಿಸಲು ನಡೆದ ಸಭೆಯ ನಡವಳಿಗಳು.**

**ಸಭೆಯಲ್ಲಿ ಭಾಗವಹಿಸಿದ ಅಧಿಕಾರಿಗಳು:**

1. ಡಾ. ಎನ್. ನಾಗಾಂಬಿಕದೇವಿ, ಭಾ.ಆ.ಸೇ., ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
2. ಶ್ರೀ ಕೆ.ಯಾಲಕ್ಕಿಗೌಡ, ನಿರ್ದೇಶಕರು(ಪಂ.ರಾಜ್-2) ಹಾಗೂ ಸರ್ಕಾರದ ಪದನಿಮಿತ್ತ ಜಂಟಿಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
3. ಶ್ರೀ ಡಿ. ಪ್ರಾಣೇಶರಾವ್, ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
4. ಶ್ರೀ ರಂಗರಾಮ ನಾಯ್ಕ, ಮುಖ್ಯ ಅಭಿಯಂತರರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು.
5. ಶ್ರೀ ಎಂ.ಸಿ.ಶಶಿಧರ್, ಅಧೀಕ್ಷಕ ಅಭಿಯಂತರರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು.
6. ಶ್ರೀ ಎಂ.ಪಿ.ಕಿಶೋರ್, ಕಾರ್ಯಪಾಲಕ ಅಭಿಯಂತರರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು.
7. ಶ್ರೀ ಎಸ್.ಡಿ.ಎ.ಸ್ವರೂಪ್, ಸಹಾಯಕ ಅಭಿಯಂತರರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು.

ಪ್ರಾರಂಭದಲ್ಲಿ ಶ್ರೀ ಕೆ.ಯಾಲಕ್ಕಿಗೌಡ, ನಿರ್ದೇಶಕರು(ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರು ಸಭೆಯಲ್ಲಿ ಹಾಜರಿದ್ದ ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಹಾಗೂ ಉಳಿದ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿದರು. ಸಭೆಯಲ್ಲಿ ಕೆಳಕಂಡ ವಿಷಯಗಳನ್ನು ಸಮಗ್ರವಾಗಿ ಚರ್ಚಿಸಿದ ನಂತರ ನಿರ್ಣಯಗಳನ್ನು ತೆಗೆದುಕೊಳ್ಳಲಾಯಿತು.

ಬೆಂಗಳೂರಿನ ಜಕ್ಕೂರಿನಲ್ಲಿರುವ ಮಹಾತ್ಮಗಾಂಧಿ ಗ್ರಾಮೀಣ ಇಂಧನ ಅಭಿವೃದ್ಧಿ ಸಂಸ್ಥೆ (MGIRED)ಯ ಆವರಣದಲ್ಲಿ ಪಂಚಾಯತ್ ರಾಜ್ ಭವನ ಅಥವಾ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡ ನಿರ್ಮಾಣ ಮಾಡಲು ಉದ್ದೇಶಿಸಲಾಗಿರುತ್ತದೆ. ಈಗಾಗಲೇ ಸದರಿ ಕಟ್ಟಡವನ್ನು ನಿರ್ಮಾಣ ಮಾಡಲು ನಿವೇಶನವನ್ನು ಗುರುತಿಸಲಾಗಿದ್ದು, ಮೆ:ಕೆಂಭಾವಿ ವಾಸ್ತುಶಿಲ್ಪಿ ವಿನ್ಯಾಸಕರಿಂದ ಕಟ್ಟಡದ ವಾಸ್ತು ವಿನ್ಯಾಸವನ್ನು ರಚಿಸಲಾಗಿರುತ್ತದೆ. ಈ ವಾಸ್ತುವಿನ್ಯಾಸಕ್ಕೆ ಈಗಾಗಲೇ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಿಂದ ಅನುಮೋದನೆ ದೊರೆತಿರುತ್ತದೆ. ಮೆ:ಕೆಂಭಾವಿ ವಾಸ್ತುವಿನ್ಯಾಸಕಾರರು ನಿರ್ಮಿಸಿದ ವಾಸ್ತುವಿನ್ಯಾಸಕ್ಕೆ ಈ ಕಟ್ಟಡದ ಒಟ್ಟು ವೆಚ್ಚದ ಶೇ.3.5ರಷ್ಟರ ಮೊತ್ತವನ್ನು ನೀಡುವಂತೆ ಕೆ.ಆರ್.ಐ.ಡಿ.ಎಲ್.ಗೆ ಪತ್ರವನ್ನು ನೀಡಿರುತ್ತಾರೆ. ಒಟ್ಟು ವೆಚ್ಚದ ಶೇ.3ರಷ್ಟರ ಮೊತ್ತಕ್ಕೆ ಕಟ್ಟಡವು ಸಂಪೂರ್ಣ ಮುಕ್ತಾಯಗೊಳ್ಳುವವರೆಗೆ ಈ ವಾಸ್ತುವಿನ್ಯಾಸಕಾರರು ಸಲಹೆಯನ್ನು ನೀಡುವುದು ಹಾಗೂ ಮೇಲುಸ್ತುವಾರಿಯನ್ನು ಮಾಡುವುದು. ಸದರಿ ವಾಸ್ತುವಿನ್ಯಾಸಕಾರರು ನೀಡಿರುವ ಪತ್ರದನ್ವಯ ವಾಸ್ತುವಿನ್ಯಾಸದ ವೆಚ್ಚವನ್ನು ಹಂತ ಹಂತವಾಗಿ ಬಿಡುಗಡೆಗೊಳಿಸಲು ಕ್ರಮ ವಹಿಸುವುದು. ಅಲ್ಲದೇ ಸದರಿ ಕಟ್ಟಡವು 11 ಮಹಡಿಗಳ ಕಟ್ಟಡವಾಗಿರುತ್ತದೆ. ಈ ಕಟ್ಟಡವನ್ನು 3 ಹಂತಗಳಲ್ಲಿ ನಿರ್ಮಾಣ ಮಾಡಲಾಗುವುದೆಂದು ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು ಇವರು ಸರ್ಕಾರಕ್ಕೆ ರೂ.47.45/- ಕೋಟಿಗಳ ಅಂದಾಜು ವೆಚ್ಚದ ಆಧಾರದ ಮೇಲೆ ನಿರ್ಮಾಣ ಮಾಡಲಾಗುವುದೆಂದು ಅಂದಾಜು ಪಟ್ಟಿ(Line Estimate)ಯನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ ಎಂಬ ವಿಷಯವನ್ನು ನಿರ್ದೇಶಕರು(ಪಂ.ರಾಜ್-2)ರವರು ಸಭೆಯ ಗಮನಕ್ಕೆ ತಂದರು. ಪ್ರತಿ ಮಹಡಿಗೆ ಸಂಬಂಧಿಸಿದಂತೆ ವಿವರವಾದ ಅಂದಾಜು ಪಟ್ಟಿ(Detailed Estimate)ಯನ್ನು ನೀಡುವಂತೆ ಕೆ.ಆರ್.ಐ.ಡಿ.ಎಲ್.ನ ಅಧಿಕಾರಿಗಳಿಗೆ ತಿಳಿಸಲಾಯಿತು.

ಸದರಿ ಕಟ್ಟಡ ನಿರ್ಮಾಣ ಮಾಡಲು ಕೇಂದ್ರ ಸರ್ಕಾರದ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ/ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯಡಿಯ ಮಾರ್ಗಸೂಚಿಗಳ ಪ್ರಕಾರ ಈಗಾಗಲೇ 2015-16ನೇ ಸಾಲಿನ ಕ್ರಿಯಾ ಯೋಜನೆಯಡಿಯಲ್ಲಿ ಅನುಮೋದನೆಯಾಗಿರುವ ರೂ.25.00ಲಕ್ಷಗಳನ್ನು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು ಇವರಿಗೆ ರಾಜ್ಯದ ಆರ್.ಜಿ.ಪಿ.ಎಸ್.ಎ ನೋಡಲ್ ಬ್ಯಾಂಕ್ ಆದ ದೇನಾ ಬ್ಯಾಂಕ್, ಇಂದಿರಾನಗರ ಶಾಖೆಯ ಉಳಿತಾಯ ಖಾತೆಯಿಂದ ಆನ್‌ಲೈನ್ ಮೂಲಕ ವರ್ಗಾಯಿಸಲು ತೀರ್ಮಾನಿಸಲಾಯಿತು.

ದಿನಾಂಕ:19-04-2017ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ 2016-17ನೇ ಸಾಲಿನಲ್ಲಿ ರಾಜ್ಯದ ಪಂಚಾಯತಿ ಸಶಕ್ತೀಕರಣ ಅಭಿಯಾನ ಯೋಜನೆಯ ಕ್ರಿಯಾ ಯೋಜನೆಯಡಿ ಕೇಂದ್ರ ಸರ್ಕಾರ ಬಿಡುಗಡೆ ಮಾಡಿರುವ ಅನುದಾನಕ್ಕೆ ರಾಜ್ಯ ಸರ್ಕಾರದ ಪಾಲಿನ ಅನುದಾನವಾದ ರೂ.5.00ಕೋಟಿಗಳನ್ನು ಈ ಹಿಂದಿನ ಸಾಲುಗಳಲ್ಲಿ ಅನುಮೋದಿತ ಚಟುವಟಿಕೆಯಾಗಿದ್ದ ಬೆಂಗಳೂರಿನ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡ ನಿರ್ಮಾಣಕ್ಕಾಗಿ ಗುರುತಿಸಲಾಗಿರುವ ಏಜೆನ್ಸಿಯಾದ ಕೆ.ಆರ್.ಐ.ಡಿ.ಎಲ್, ಬೆಂಗಳೂರು ಇವರಿಗೆ ಬಿಡುಗಡೆಗೊಳಿಸುವಂತೆ ನಿರ್ಧರಿಸಲಾಯಿತು.

2015-16ನೇ ಸಾಲಿನಲ್ಲಿ ಹಿಂದುಳಿದ ಪ್ರದೇಶ ಅಭಿವೃದ್ಧಿ ಅನುದಾನ ನಿಧಿ ಯೋಜನೆಯ Exit Plan ನಡಿ ರಾಜ್ಯ ಸರ್ಕಾರವು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು ಇವರಿಗೆ ರಾಜ್ಯದ ಪಾಲಿನ ಅನುದಾನ ರೂ.3.09ಕೋಟಿಗಳನ್ನು ಬಿಡುಗಡೆಗೊಳಿಸಿರುವುದನ್ನು ಬಳಕೆ ಮಾಡದೇ ಬಾಕಿ ಉಳಿಸಿಕೊಂಡಿರುವುದನ್ನು ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡವನ್ನು ಸ್ಥಾಪಿಸಲು ಬಳಸಿಕೊಳ್ಳಲು ನಿರ್ಧರಿಸಲಾಯಿತು. ಸದರಿ ಅನುದಾನವನ್ನು ನೇರವಾಗಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು ಇವರಿಗೆ ಆನ್‌ಲೈನ್ ಮೂಲಕ ವರ್ಗಾಯಿಸಲು ಸೂಚಿಸಲಾಯಿತು.

2017-18ನೇ ಸಾಲಿನ ಗ್ರಾಮೀಣಾಭಿವೃದ್ಧಿ ಭವನ ಮತ್ತು ಇತರೆ ಕಟ್ಟಡಗಳ ಲೆಕ್ಕ ಶೀರ್ಷಿಕೆ 2515-00-196-1-14ರಡಿ ಆಯವ್ಯಯದಲ್ಲಿ ಒದಗಿಸಲಾಗಿರುವ ಒಟ್ಟು ರೂ.30.00ಕೋಟಿಗಳನ್ನು ಒದಗಿಸಿರುತ್ತಾರೆ. ಸದರಿ ಅನುದಾನದಲ್ಲಿ ಇತ್ತೀಚಿಗೆ ಹೊಸದಾಗಿ ರಚಿಸಲಾಗಿರುವ ಗ್ರಾಮ ಪಂಚಾಯತಿಗಳಿಗೆ ಕಟ್ಟಡ ನಿರ್ಮಾಣ ಮಾಡಲು ಹಾಗೂ ಇತರೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ರೂ.20.00 ಕೋಟಿಗಳು, ತಾಲ್ಲೂಕು ಪಂಚಾಯತಿ ಕಟ್ಟಡ ನಿರ್ಮಾಣಕ್ಕಾಗಿ ರೂ.5.00 ಕೋಟಿಗಳು ಹಾಗೂ ಪಂಚಾಯತ್ ರಾಜ್ ಭವನ ಅಥವಾ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡ ನಿರ್ಮಾಣ ಮಾಡಲು ರೂ.5.00ಕೋಟಿಗಳನ್ನು ಹಂಚಿಕೆ ಮಾಡಿ ಬಿಡುಗಡೆ ಮಾಡಲು ತೀರ್ಮಾನಿಸಲಾಯಿತು. ಈ ರೀತಿಯಾಗಿ ಅನುದಾನವನ್ನು ಹಂಚಿಕೆ ಮಾಡಲು ಸರ್ಕಾರದ ಆದೇಶವನ್ನು ಹೊರಡಿಸಬೇಕಾಗಿದ್ದು, ಈ ಕುರಿತು ನಿರ್ದೇಶಕರು(ಪಂ.ರಾಜ್-1) ಇವರ ಶಾಖೆಯಿಂದ ಕ್ರಮ ವಹಿಸುವುದು. ಅದರಂತೆ, ಪಂಚಾಯತ್ ರಾಜ್ ಭವನ ಅಥವಾ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡ ನಿರ್ಮಾಣ ಮಾಡಲು ರೂ.5.00ಕೋಟಿಗಳನ್ನು ಹಂಚಿಕೆ ಮಾಡಲಾಗಿದ್ದು, ಸದರಿ ಹಂಚಿಕೆ ಮಾಡಿರುವ ಅನುದಾನವನ್ನು ಗುರುತಿಸಲಾಗಿರುವ ಏಜೆನ್ಸಿಯಾದ ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು ಇವರಿಗೆ ಬಿಡುಗಡೆಗೊಳಿಸಲು ಕ್ರಮ ವಹಿಸುವುದು.

ದಿನಾಂಕ:21-11-2016ರಂದು ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು ಇವರು ಸದರಿ ಕಟ್ಟಡ ಅಂದಾಜು ವೆಚ್ಚ ರೂ.47.45ಕೋಟಿಗಳಾಗಿರುತ್ತದೆಂದು ಸರ್ಕಾರಕ್ಕೆ ಅಂದಾಜು ಪಟ್ಟಿ(Line Estimate)ಯನ್ನು ಸಲ್ಲಿಸಿರುತ್ತಾರೆ. ಸದರಿ ದರಗಳು 2016-17ನೇ ಸಾಲಿನ ದರಗಳಾಗಿರುತ್ತವೆ. ಆದರೆ, ಸದ್ಯ ನಾವು 2017-18ನೇ ಆರ್ಥಿಕ ವರ್ಷದಲ್ಲಿರುವುದರಿಂದ ಕಟ್ಟಡವು ಪ್ರಾರಂಭವಾಗಿ ಮುಕ್ತಾಯವಾಗುವುದರೊಳಗಾಗಿ ಅಂದಾಜು ವೆಚ್ಚವು ಏರಿಕೆಯಾಗುವ ಸಂಭವವಿರುತ್ತದೆಂದು ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮದ ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು. ಸದರಿ ಕಟ್ಟಡದ ವಿವರವಾದ ಅಂದಾಜು ಪಟ್ಟಿಯನ್ನು (Detailed Estimate) ನೀಡುವಂತೆ ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮದ ಅಧಿಕಾರಿಗಳಿಗೆ ತಿಳಿಸಿದರು.

ಪಂಚಾಯತ್ ರಾಜ್ ಭವನ ಅಥವಾ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡ ನಿರ್ಮಾಣದ ಸಂಬಂಧವಾಗಿ ಕಡತವನ್ನು ಆರ್ಥಿಕ ಇಲಾಖೆಗೆ ಕಳುಹಿಸಿಕೊಡುವುದು. ಸದರಿ ಗುರುತಿಸಲಾಗಿರುವ ಕರ್ನಾಟಕ

ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು ಇವರಿಗೆ ಕಟ್ಟಡವನ್ನು ನಿರ್ಮಿಸಲು ಆರ್ಥಿಕ ಇಲಾಖೆಯಿಂದ 4G ವಿನಾಯಿತಿಯನ್ನು ಪಡೆಯಲು ಕ್ರಮ ವಹಿಸುವುದು. ತದನಂತರ ಈ ಕಟ್ಟಡವನ್ನು ನಿರ್ಮಾಣ ಮಾಡುವ ಸಂಬಂಧವಾಗಿ ವೇಳಾಪಟ್ಟಿಯನ್ನು ಸಿದ್ಧಪಡಿಸಿಕೊಂಡು ಅದರ ಪ್ರಕಾರವಾಗಿ ಮುಕ್ತಾಯಗೊಳಿಸಲು ಕ್ರಮವಹಿಸುವಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರು ಸಭೆಗೆ ತಿಳಿಸಿದರು.

ಸದರಿ ಕಟ್ಟಡವು ಸ್ವಯಂ ಸಮರ್ಥನೀಯತೆ (Self Sustainability) ಹೊಂದುವ ಹಾಗೆ ಸೂಕ್ತ ಕ್ರಮವನ್ನು ಕೈಗೊಳ್ಳುವುದು. ಕಟ್ಟಡವು ಬೃಹತ್ ಪ್ರಮಾಣದ ಆಡಿಟೋರಿಯಂ ಅನ್ನು ಒಳಗೊಂಡಿರಬೇಕೆಂದು ಸೂಚಿಸಿದರು. ಸದರಿ ಕಟ್ಟಡ ನಿರ್ಮಾಣ ಮಾಡಲು ಕೇಂದ್ರ ಸರ್ಕಾರದಿಂದ ಯಾವುದೇ ದೊಡ್ಡ ಪ್ರಮಾಣದ ಅನುದಾನವು ಬಿಡುಗಡೆಗೊಳ್ಳದೇ ಇರುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವೇ ಸದರಿ ಕಟ್ಟಡವನ್ನು ಮುಕ್ತಾಯಗೊಳಿಸಲು ಸಂಪನ್ಮೂಲ ಕ್ರೋಢೀಕರಣ ಮಾಡಬೇಕಾಗಿರುವ ಸಂದರ್ಭ ಒದಗಿಬಂದಿರುತ್ತದೆ. ಮೇಲೆ ತಿಳಿಸಿದಂತೆ ಅನುದಾನವನ್ನು ಬಿಡುಗಡೆಗೊಳಿಸುವುದರೊಂದಿಗೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಂದ ದೇಣಿಗೆಯ ರೂಪದಲ್ಲಿ ರೂ.50,000/-ಗಳ ಹಣವನ್ನು ಸಂಗ್ರಹಿಸಲು ತೀರ್ಮಾನಿಸಲಾಯಿತು. ರೂ.10.00 ಲಕ್ಷಗಳಿಗಿಂತ ಹೆಚ್ಚಿಗೆ ಆದಾಯವಿರುವ ಗ್ರಾಮ ಪಂಚಾಯತಿಗಳು ಮತ್ತು ದೇಣಿಗೆ ನೀಡಲು ಅನುಕೂಲವಿರುವ ಗ್ರಾಮ ಪಂಚಾಯತಿಗಳು ಒಂದೇ ಭಾರಿ ದೇಣಿಗೆ ಹಣವನ್ನು ರಾಜ್ಯ ಸರ್ಕಾರಕ್ಕೆ ನೀಡುವುದು. ಉಳಿದಂತೆ ರೂ.10.00 ಲಕ್ಷಗಳಿಗಿಂತ ಕಡಿಮೆ ಆದಾಯವಿರುವ ಗ್ರಾಮ ಪಂಚಾಯತಿಗಳು 2-3 ಹಂತಗಳಲ್ಲಿ ದೇಣಿಗೆಯನ್ನು ನೀಡುವಂತೆ ಕೋರಲು ನಿರ್ಧರಿಸಲಾಯಿತು. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಅಧಿಕಾರಿಗಳು ಹಾಗೂ ನೌಕರರುಗಳಿಗೆ ಬೆಂಗಳೂರು ನಗರದಲ್ಲಿ ಯಾವುದೇ ಕಟ್ಟಡವಿಲ್ಲದಿರುವುದರಿಂದ ಅವರಿಗೆ 2 ಅಂತಸ್ತುಗಳ ಕಟ್ಟಡವನ್ನು ನೀಡಬಹುದು ಮತ್ತು ಎಲ್ಲಾ ಅಧಿಕಾರಿಗಳು ಮತ್ತು ನೌಕರರಿಂದ ಒಂದು ದಿನದ ವೇತನವನ್ನು ನೌಕರರು/ಸಿಬ್ಬಂದಿಗಳು ಸ್ವಇಚ್ಛೆಯಿಂದಲೇ ನೀಡಿದ್ದಲ್ಲಿ ಪಡೆದುಕೊಳ್ಳಬಹುದೆಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರು ಸಭೆಗೆ ತಿಳಿಸಿದರು. 2 ಅಂತಸ್ತುಗಳ ಕಟ್ಟಡವನ್ನು ಸೂಕ್ತವಾಗಿ ನಿರ್ಮಿಸಬೇಕೆಂದು ಅವುಗಳಲ್ಲಿ ವಸತಿ ವ್ಯವಸ್ಥೆ, ಸಾಂಸ್ಕೃತಿಕ ಕಾರ್ಯಕ್ರಮ, ಕಾರ್ಯಾಗಾರ ಹಾಗೂ ತರಬೇತಿ ಇತ್ಯಾದಿಗಳನ್ನು ನಡೆಸಲು ಅವಕಾಶವಿರಬೇಕೆಂದು ತಿಳಿಸಿದರು. ಸದರಿ ವಿಷಯಗಳನ್ನು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅವಗಾಹನೆಗೆ ತಂದು ಅಗತ್ಯ ಕ್ರಮ ವಹಿಸಲು ನಿರ್ಧರಿಸಲಾಯಿತು.

ಅಂತಿಮವಾಗಿ ನಿರ್ದೇಶಕರು(ಪಂ.ರಾಜ್-2)ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳನ್ನು ವಂದಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಕಡತ ಸಂಖ್ಯೆ:ಗ್ರಾಅಪ 06 ತಾಪಸ 2011(ಪಿ-1)**

**(ಡಾ|| ಎನ್. ನಾಗಾಂಬಿಕಾ ದೇವಿ)**
ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು.
3. ಮುಖ್ಯ ಅಭಿಯಂತರರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು.
4. ಸಹಾಯಕ ಅಭಿಯಂತರರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು.

**ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ:**

1. ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯತಿಗಳು.
2. ರಾಜ್ಯದ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯತಿಗಳು (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
3. ರಾಜ್ಯದ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಎಲ್ಲಾ ಗ್ರಾಮ ಪಂಚಾಯತಿಗಳು (ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
2. ನಿರ್ದೇಶಕರು (ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರಿಗೆ.